ವೈದ್ಯಾಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳು

3852(4154); ಶ್ರೀ ಕೃಷ್ಣಾರೆಡ್ಡಿ. ಎಂ (ಚಿಂತಾಮಣಿ)

ಅ) ಚಿಂತಾಮಣಿ ನಗರದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಹೆರಿಗೆಗೆ ಬರುವ ಗರ್ಭಿಣಿಯರಿಂದ ಹಣ ಪಡೆಯುತ್ತಿರುವುದಾಗಿ ಹಾಗೂ ಆಸ್ಪತ್ರೆಯಲ್ಲಿ ಮಿತಿಮೀರಿದ ಭ್ರಷ್ಟಾಚಾರ ನಡೆಯುತ್ತಿದ್ದು, ರೋಗಿಗಳ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸದರಿ ವೈದ್ಯರನ್ನು ಬೇರೆ ಕಡೆ ವರ್ಗಾವಣೆ ಮಾಡಿ ಇವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಮನವಿ ಮಾಡಿದ್ದರೂ ಸಹ, ವರ್ಗಾವಣೆ ಮಾಡದೆ ಹಾಗೂ ಇವರ ಮೇಲೆ ಯಾವ ಕ್ರಮವನ್ನು ಕೈಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಸಾರ್ವಜನಿಕ ಆಸ್ಪತ್ರೆ ಚಿಂತಾಮಣಿ, ಇಲ್ಲಿನ ಆಡಳಿತ ವೈದ್ಯಾಧಿಕಾರಿಯಾದ ಡಾ॥ ಎನ್.ಆರ್. ಜಯಂತಿ ಮತ್ತು ಡಾ॥ ಮಂಜುಳ ಅವರ ವಿರುದ್ಧ ಸರ್ಕಾರಕ್ಕೆ ದೂರು ಬಂದಿದ್ದು, ಸದರಿ ದೂರಿನ ಬಗ್ಗೆ ಜಿಲ್ಲಾ ಯೋಜನಾ ನಿರ್ವಹಣಾಧಿಕಾರಿಗಳು, (ಕೆ.ಹೆಚ್.ಎಸ್.ಡಿ.ಆರ್.ಪಿ) ಚಿಕ್ಕಬಳ್ಳಾಪುರ ಹಾಗೂ ಜಿಲ್ಲಾ ಮಲೇರಿಯಾಧಿಕಾರಿಗಳು, ಚಿಕ್ಕಬಳ್ಳಾಪುರ ಇವರುಗಳು ನೀಡಿರುವ ತನಿಖಾ ವರದಿ ಆಧರಿಸಿ, ಡಾ॥ ಎನ್.ಆರ್. ಜಯಂತಿ ಇವರ ವಿರುದ್ಧದ ಆರೋಪದ ಬಗ್ಗೆ ಆಯುಕ್ತರ ಆದೇಶ ಸಂಖ್ಯೆ: ಡಿಪಿಜಿ/ಕೋ/21/2013–14, ದಿನಾಂಕ:09/05/2014 ರಲ್ಲಿ ಈಗಾಗಲೇ ಇಲಾಖಾ ವಿಚಾರಣೆಗೆ ವಹಿಸಲಾಗಿದೆ. ಹಾಗೂ ಡಾ॥ ಮಂಜುಳ ಇವರ

ವಿರುದ್ಧದ ಆರೋಪದ ಬಗ್ಗೆ ಸಹ ಇಲಾಖಾ ನಡೆಸಲು ಪರಿಶೀಲಿಸಲಾಗುತ್ತಿದೆ.

ಆ) ಇವರ ವಿರುದ್ಧ ನಡೆಸುತ್ತಿರುವ ಇಲಾಖಾ ವಿಚಾರಣೆಯ ಅಂತಿಮ ವರದಿಯನ್ನು ಆಧರಿಸಿ ಇವರ ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

ಇ) ಸದರಿ ವೈದ್ಯಾಧಿಕಾರಿಗಳ ವಿರುದ್ಧದ ಆರೋಪದ ಬಗ್ಗೆ ಇಲಾಖಾ ವಿಚಾರಣೆಗೆ ವಹಿಸಲು ಕ್ರಮ ಕೈಗೊಳ್ಳಲಾಗಿದೆ.

ವೈದ್ಯಕೀಯ ಸೇವೆಗಳು

3853(4155); ಶ್ರೀ ಕೃಷ್ಣಾರೆಡ್ಡಿ (ಚಿಂತಾಮಣಿ)

ಅ) ರಾಜ್ಯದ ವೈದ್ಯಕೀಯ ವಿಶ್ವವಿದ್ಯಾಲಯದಿಂದ ಪದವಿ ಪಡೆದ ವೈದ್ಯರಿಂದ ವೈದ್ಯಕೀಯ ಸೇವೆಗಳು ಲಭ್ಯವಿಲ್ಲದ ಹಳ್ಳಿಗಳಲ್ಲಿ ವಂಶಪಾರಂಪರಿಕವಾಗಿ ವೈದ್ಯರು ಸುಮಾರು 30–35 ವರ್ಷಗಳಿಂದ ಪದ್ಧತಿಯಲ್ಲಿ ವೈದ್ಯಕೀಯ ಸೇವೆಯನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ವೈದ್ಯರಿಗೆ ಆಯುಷ್ ಇಲಾಖೆ ವತಿಯಿಂದ ನೀಡುತ್ತಿರುವ ಪ್ರೋತ್ಸಾಹ ಹಾಗೂ ಆಯುಷ್ ಪದ್ಧತಿಯು ಉಳಿಯಲು ಇಂತಹ ವಂಶಪಾರೆಂಪರಿಕ ವೈದ್ಯರನ್ನು ಗುರುತಿಸಿ ಅವರಿಗೆ ಕಾನೂನು ಅಡಿಯಲ್ಲಿ ತರಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಸದರಿ ವೈದ್ಯರ ಬಗ್ಗೆ ಸರ್ಕಾರದ ಯೋಜನೆಗಳನ್ನೇನಾದರು ಹಾಕಿಕೊಂಡಿದೆಯೇ; (ವಿವರ ನೀಡುವುದು).

ಈ) ಆಯುಷ್ ಪದ್ಧತಿ ಮುಂದಿನ ಜನಾಂಗಕ್ಕೆ ಉಳಿಯಲು ಇವರು ಬಳಸುತ್ತಿರುವ ಔಷಧಿಗಳ ಬಗ್ಗೆ ಈ ತನಕ ಕ್ರೋಢೀಕರಿಸಿದ ಮಾಹಿತಿಗಳ ವಿವರ ನೀಡುವುದು;